<u>ಕರ್ನಾಟಕ ಸರ್ಕಾರದ ನಡವಳಿಗಳು</u>

<u>ವಿಷಯ</u> : ರಾಜ್ಯದಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011"ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸಕಾಲದ ಇತರೆ ಖರ್ಚುವೆಚ್ಚಗಳನ್ನು ಭರಿಸಲು ಅನುದಾನವನ್ನು ಮಂಜೂರು ಮಾಡುವ ಬಗ್ಗೆ.

<u>ಓದಲಾಗಿದೆ</u> :

(1) ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 28 ಇಕಾಅ 2012, ದಿನಾಂಕ:28/03/2012.

(2) ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ನಾಸೇಖಾ 2012, ದಿನಾಂಕ: 29/11/2012.

(3) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 196 ನಾಸೇಖಾ 2012, ದಿನಾಂಕ: 21/03/2013.

<u>ಪ್ರಸ್ತಾವನೆ</u> :

ಮೇಲೆ ಓದಲಾದ (1) ರ ಅಧಿಸೂಚನೆಯಲ್ಲಿ ರಾಜ್ಯ ಸರ್ಕಾರವು 11 ಇಲಾಖೆಗಳ ಮುಖಾಂತರ 151 ಕಾಲಮಿತಿ ಸೇವೆಗಳನ್ನು ಕರ್ನಾಟಕ ನಾಗರೀಕರಿಗೆ ಒದಗಿಸಲು ಕರ್ನಾಟಕ ನಾಗರೀಕರಿಗೆ ಸೇವೆಗಳ ಖಾತರಿ ಅಧಿನಿಯಮ 2011 ಅನ್ನು ದಿನಾಂಕ:02/04/2012 ರಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ.

ಮೇಲೆ ಓದಲಾದ (2) ರ ಅಧಿಸೂಚನೆಯಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ರ ಸಂಬಂಧ ಸರ್ಕಾರದ ಕ್ರಮಾಂಕ: ಸಿಆಸುಇ 119 ನಾಸೇಖಾ 2012, ದಿನಾಂಕ: 26/10/2012 ರ ಅಧಿಸೂಚನೆ-1 ರ ತಿದ್ದುಪಡಿ ಅಧಿಸೂಚನೆಯಲ್ಲಿ ಸೇರಿಸಿರುವ ಹೆಚ್ಚುವರಿ ಸೇವೆಗಳಲ್ಲಿ 12 ಇಲಾಖೆಗಳ 93 ಹೆಚ್ಚುವರಿ ಸೇವೆಗಳನ್ನು ಹಾಗೂ ಸಿಬ್ಬಂದಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ 21 ಸೇವೆಗಳನ್ನು ದಿನಾಂಕ: 3ನೇ ಡಿಸೆಂಬರ್ 2012 ರಿಂದ ರಾಜ್ಯದಾದ್ಯಂತ ಜಾರಿಗೆ ಬರುವಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ.

"ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011"ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸಕಾಲದ ಇತರೆ ಖರ್ಚುವೆಚ್ಚಗಳನ್ನು ಭರಿಸಲು 2013-2014ನೇ ಸಾಲಿಗೆ ಪ್ರತಿ ಜಿಲ್ಲಾಧಿಕಾರಿಗಳ ಕಛೇರಿಗೆ ರೂ. 10,000/-ಗಳಂತೆ 30 ಜಿಲ್ಲೆಗಳಿಗೆ ಮಂಜೂರಾತಿ ನೀಡಲು ಸರ್ಕಾರದಲ್ಲಿ ತೀರ್ಮಾನಿಸಿದೆ.

ಅದರಂತೆ ಈ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 190 ನಾಸೇಖಾ 2013,</u>
<u>ಬೆಂಗಳೂರು, ದಿನಾಂಕ: 2ನೇ ಆಗಸ್ಟ್, 2013.</u>

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, "ಕರ್ನಾಟಕ ಸಕಾಲ ಸೇವೆಗಳ

ಅಧಿನಿಯಮ 2011" ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸಕಾಲದ ಇತರೆ ಖರ್ಚುವೆಚ್ಚಗಳನ್ನು ಭರಿಸಲು ಪ್ರತಿ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಛೇರಿಗೆ ರೂ.10,000/-ಗಳಂತೆ ಒಟ್ಟಾರೆ 30 ಜಿಲ್ಲೆಗಳಿಗೂ ಸೇರಿ 2013-2014ನೇ ಸಾಲಿಗೆ ರೂ.3,00,000/- (ಮೂರು ಲಕ್ಷ ರೂಪಾಯಿಗಳು ಮಾತ್ರ) ಗಳಿಗೆ ಮಂಜೂರಾತಿ ನೀಡಿ ಬಿಡುಗಡೆ ಮಾಡಲಾಗಿದೆ.

ಈ ಮೇಲಿನ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2052-00-090-0-26-051 (ಯೋಜನೇತರ) ಅಡಿಯಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011ರ ಅನುಷ್ಠಾನದಡಿ 2013-14ನೇ ಸಾಲಿಗೆ ಒದಗಿಸಿರುವ ಅನುದಾನದಡಿ ಭರಿಸತಕ್ಕುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 04 ಟಿಎಫ್‌ಪಿ 2012, ದಿನಾಂಕ:27/04/2012 ಹಾಗೂ ಎಫ್.ಡಿ 01 ಟಿಎಫ್‌ಪಿ 2013, ದಿನಾಂಕ: 20.04.2013ರ ಸರ್ಕಾರದ ಆದೇಶಗಳಲ್ಲಿ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಎನ್.ವರಪ್ರಸಾದ್ ರೆಡ್ಡಿ)
ಆಡಳಿತಾಧಿಕಾರಿಗಳು ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿಗಳು,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಸು-ನಾಗರೀಕ ಸೇವೆಗಳು)

<u>ಇವರಿಗೆ :</u>

1. ಕರ್ನಾಟಕ ಮಹಾಲೇಖಪಾಲರು, (ಲೆಕ್ಕಪತ್ರ)/(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ ಅಂಡ್ ಆರ್), ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಹಾಗೂ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು /ಎಲ್ಲಾ ಜಿಲ್ಲೆಯ ಖಜಾನಾಧಿಕಾರಿಗಳು

6. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಉಪ ನಿರ್ದೇಶಕರು, ಟಿ.ಎಸ್.ಎಂ.ಸಿ. ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
9. ಅಪರ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಸಿಆಸುಇ (ಆಸು) ವಿಶ್ವೇಶ್ವರಯ್ಯ ದೊಡ್ಡ ಗೋಪುರ, 20ನೇ ಮಹಡಿ, ಬೆಂಗಳೂರು.
10. ಆಡಳಿತಾಧಿಕಾರಿ, ಸಕಾಲ ಮಂಡಳಿ, ಸಿಆಸುಇ (ಆಸು), ಬೆಂಗಳೂರು.
11. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು
12. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.